# <u>ಕರ್ನಾಟಕ ವಿಧಾನ ಪರಿಷತ್ತು</u>

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 437
ಸದಸ್ಯರ ಹೆಸರು : ಶ್ರೀಮತಿ ಹೇಮಲತಾ ನಾಯಕ್
ಉತ್ತರಿಸುವ ಸಚಿವರು : ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು
ಉತ್ತರಿಸುವ ದಿನಾಂಕ : 13.08.2025

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ. | ರಾಜ್ಯದಲ್ಲಿನ ಎಲ್ಲಾ ರಸ್ತೆ ಸಾರಿಗೆ ನಿಗಮಗಳ ನೌಕರರ ವೇತನ ಈ ಹಿಂದೆ ಯಾವ ವರ್ಷದಲ್ಲಿ ಪರಿಷ್ಕರಣೆಯಾಗಿದೆ; ಸರ್ಕಾರದ ನಿಯಮಾವಳಿಗಳ ಪ್ರಕಾರ ಎಷ್ಟು ವರ್ಷಗಳಿಗೊಮ್ಮೆ ನೌಕರರ ವೇತನ ಪರಿಷ್ಕರಣೆಯಾಗಬೇಕು (ಮಾಹಿತಿ ಒದಗಿಸುವುದು) | ರಾಜ್ಯ ರಸ್ತೆ ಸಾರಿಗೆ ನಿಗಮಗಳ ನೌಕರರ ವೇತನವನ್ನು ಕೈಗಾರಿಕಾ ಒಪ್ಪಂದದನ್ವಯ ಪ್ರತಿ ನಾಲ್ಕು ವರ್ಷಗಳಿಗೊಮ್ಮೆ ಒಪ್ಪಂದವನ್ನು (ಅಗ್ರೀಮೆಂಟ್) ಪರಿಷ್ಕರಿಸುವ ಪದ್ಧತಿ ಜಾರಿಯಲ್ಲಿದ್ದು, ನಿಗಮಗಳ ಆರ್ಥಿಕ ಸಾಮರ್ಥ್ಯವನ್ನು ಗಣನೆಗೆ ತೆಗೆದುಕೊಂಡು ಸರ್ಕಾರದ ಅನುಮೋದನೆ ಪಡೆದು ವೇತನ ಪರಿಷ್ಕರಣೆಯನ್ನು ಮಾಡುವ ಪದ್ಧತಿ ಜಾರಿಯಲ್ಲಿರುತ್ತದೆ.<br><br>ಸರ್ಕಾರದ ಆದೇಶ ಸಂಖ್ಯೆ:ಟಿಡಿ 12 ಟಿಸಿಬಿ 2023, ದಿನಾಂಕ:17.03.2023ರಲ್ಲಿ ರಸ್ತೆ ಸಾರಿಗೆ ನಿಗಮಗಳ ಅಧಿನಿಯಮ 1950ರ ಸೆಕ್ಷನ್ 34(1)ರನ್ವಯ ದಿನಾಂಕ:01.03.2023 ರಿಂದ ಜಾರಿಗೆ ಬರುವಂತೆ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ, ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ, ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ ಮತ್ತು ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮ ಮತ್ತು ಪೂರ್ವ ಕಿಂಕೋ ಅಧಿಕಾರಿಗಳ/ ನೌಕರರೂ ಸೇರಿದಂತೆ ದಿನಾಂಕ:31.12.2019 ರಂದು ಪಡೆಯುತ್ತಿದ್ದ ಮೂಲ ವೇತನವನ್ನು ಶೇ.15ರಷ್ಟು ಹೆಚ್ಚಿಸಿ, **ದಿನಾಂಕ:01.03.2023 ರಿಂದ ಜಾರಿಗೆ ಬರುವಂತೆ** ವೇತನ ಪರಿಷ್ಕರಣೆಯನ್ನು ಜಾರಿಗೊಳಿಸಲಾಗಿದೆ.<br>ನಾಲ್ಕು ಸಾರಿಗೆ ನಿಗಮಗಳಲ್ಲಿ ಜುಲೈ-2025ರವರೆಗೆ ವೇತನವನ್ನು ಪಾವತಿಸಲಾಗಿದ್ದು, ವೇತನ ಪಾವತಿಸಲು ಬಾಕಿಯಿರುವುದಿಲ್ಲ.<br><br>ರಾಜ್ಯ ರಸ್ತೆ ಸಾರಿಗೆ ನಿಗಮಗಳು ರಸ್ತೆ ಸಾರಿಗೆ ನಿಗಮಗಳ ಕಾಯ್ದೆ-1950 (The Road Transport Corporation Act,1950) ರಡಿ ಅಸ್ತಿತ್ವಕ್ಕೆ ಬಂದಿರುವ ಸರ್ಕಾರಿ ಸ್ವಾಮ್ಯದ ಸ್ವಾಯತ್ತ ಸಂಸ್ಥೆ ಆಗಿರುತ್ತದೆ. ರಸ್ತೆ ಸಾರಿಗೆ ನಿಗಮಗಳ ನಿರ್ವಹಣೆ ಮತ್ತು ಸಿಬ್ಬಂದಿಗಳ ವೇತನ ಹಾಗೂ ಎಲ್ಲಾ ಆರ್ಥಿಕ ಸೌಲಭ್ಯಗಳನ್ನು ನಿಗಮಗಳು ನಿಯಮಾನುಸಾರ ತಮ್ಮ ಆಂತರಿಕ ಮೂಲಗಳಿಂದಲೇ ಭರಿಸಬೇಕಾಗಿರುತ್ತದೆ.<br><br>ಆದಾಗ್ಯೂ ದಿನಾಂಕ:01.01.2020 ರಿಂದ 28.02.2023ರ ಅವಧಿಯಲ್ಲಿ ಸೇವಾವಿಮುಕ್ತಿ ಹೊಂದಿದ ಅಧಿಕಾರಿ ಮತ್ತು ನೌಕರರಿಗೆ ಪಾವತಿಸಬೇಕಾದ ಪರಿಷ್ಕೃತ ವೇತನ ಶ್ರೇಣಿಯಲ್ಲಿ ಉಪಧನ ಹಾಗೂ ಗಳಿಕೆ ರಜೆ ನಗದೀಕರಣ ಪಾವತಿಗಾಗಿ ರೂ.224.05 ಕೋಟಿಗಳ ವಿಶೇಷ ಅನುದಾನವನ್ನು ಬಿಡುಗಡೆಗೊಳಿಸಲಾಗಿದೆ. |
| ಆ. | ಸಾರಿಗೆ ಇಲಾಖೆ ನೌಕರರ ವೇತನ ಪರಿಷ್ಕರಣೆ ಯಾವ ಸಾಲಿನಿಂದ ಬಾಕಿ ಇರುತ್ತದೆ; ಸರ್ಕಾರ ಇಲ್ಲಿಯವರೆಗೂ ಪರಿಷ್ಕರಣೆ ಮಾಡದಿರಲು ಕಾರಣವೇನು; (ಮಾಹಿತಿ ಒದಗಿಸುವುದು) | |
| ಇ. | ಸಾರಿಗೆ ಇಲಾಖೆ ನೌಕರರ ವೇತನಕ್ಕಾಗಿ ಪಾವತಿಸಲು ಬಾಕಿಯಿರುವ ಮೊತ್ತವೆಷ್ಟು; (ನಿಗಮವಾರು ಮಾಹಿತಿ ಒದಗಿಸುವುದು) | |
| ಈ. | ವೇತನ ಪರಿಷ್ಕರಣೆ ಹಾಗೂ ಬಾಕಿಯಿರುವ ವೇತನ ಪಾವತಿಸಲು ಸರ್ಕಾರ ಏನು ಕ್ರಮ ಕೈಗೊಳ್ಳುವುದು; ಇದಕ್ಕೆ ಕಾಲಮಿತಿ ನಿಗದಿಪಡಿಸಲಾಗಿದೆಯೇ (ಮಾಹಿತಿ ಒದಗಿಸುವುದು)? | |

ಸಂಖ್ಯೆ: ಟಿಡಿ 152 ಟಿಸಿಕ್ಯೂ 2025

**(ರಾಮಲಿಂಗಾರೆಡ್ಡಿ)**
ಸಾರಿಗೆ ಮತ್ತು ಮುಜರಾಯಿ ಸಚಿವರು